**ಕರ್ನಾಟಕ ಸರ್ಕಾರ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ, ಬೆಂಗಳೂರು-560 052.

**ಪ್ರಕಟಣೆ**

ಸಂಖ್ಯೆ:ಹಿಂವಕಇ/ತರಬೇತಿ-1/ಪಿಹೆಚ್.ಡಿ/ ಸಿಆರ್-1/2022-23 ದಿನಾಂಕ:14.12.2022.

**2022-23 ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಅರ್ಹ ಹೊಸ ವಿದ್ಯಾರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸುವ ಕುರಿತು.**

## ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಸೂಚನೆಗಳು
## (Instructions to the Students)

1. **ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಸೌಲಭ್ಯವನ್ನು ಪಡೆಯಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.**
2. ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ ಮಾಸಿಕ ರೂ.10,000/- ದಂತೆ ಗರಿಷ್ಠ 3 ವರ್ಷಗಳ ಅವಧಿಗೆ ವ್ಯಾಸಂಗ ವೇತನ/ಫೆಲೋಶಿಪ್ ಅನ್ನು ಪ್ರವರ್ಗವಾರು, ಮೀಸಲಾತಿ, ಮೆರಿಟ್ ಹಾಗೂ ಅನುದಾನ ಲಭ್ಯತೆಗೆ ಅನುಗುಣವಾಗಿ ಹಾಗೂ ನಿಯಮಾನುಸಾರ ಅರ್ಹ ವಿದ್ಯಾರ್ಥಿಗಳಿಗೆ ನೀಡಲಾಗುವುದು.
3. **ನಿಗದಿಪಡಿಸಿರುವ ಅರ್ಹತೆಗಳು**:
   (a) ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.
   (b) ಕರ್ನಾಟಕ ಸರ್ಕಾರದ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು.
   (c) ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳಲ್ಲಿ/ ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪೂರ್ಣಾವಧಿ (Full Time) ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು.
   (d) ಈ ಸೌಲಭ್ಯವನ್ನು ಪಡೆಯಲಿಚ್ಛಿಸುವ ವಿದ್ಯಾರ್ಥಿಯು ಭಾರತ ಸರ್ಕಾರ/ಕರ್ನಾಟಕ ಸರ್ಕಾರ/ ವಿಶ್ವವಿದ್ಯಾಲಯ ಅಥವಾ ಇತರೆ ಯಾವುದೇ ಸಂಸ್ಥೆಗಳಿಂದ ಮಾಸಿಕ ವ್ಯಾಸಂಗ ವೇತನ/ ಫೆಲೋಶಿಪ್ ಗೆ ಆಯ್ಕೆಯಾಗಿರಬಾರದು ಹಾಗೂ ಫೆಲೋಶಿಪ್ ಪಡೆದಿರಬಾರದು.
4. **ಶೈಕ್ಷಣಿಕ ಅರ್ಹತೆಗಳು:**
   (a) ಸ್ನಾತಕೋತ್ತರ ಪದವಿಯಲ್ಲಿ ಕನಿಷ್ಠ **ಶೇ.55** ಅಂಕಗಳನ್ನು ಪಡೆದಿರಬೇಕು.
   (b) ವಿಶ್ವ ವಿದ್ಯಾಲಯ/ ಅಧಿಕೃತ ಸಂಸ್ಥೆಗಳಲ್ಲಿ ಸಂಶೋಧನಾ ಮಾರ್ಗದರ್ಶಕರಡಿಯಲ್ಲಿ ಪಿಎಚ್.ಡಿ ಅಧ್ಯಯನಕ್ಕಾಗಿ ನೋಂದಣಿ ಮಾಡಿಕೊಂಡಿರಬೇಕು.
   (c) ವಿದ್ಯಾರ್ಥಿಗಳು ಪೂರ್ಣಾವಧಿ ಪಿಹೆಚ್.ಡಿ ಅಧ್ಯಯನಕ್ಕಾಗಿ ಮಾಡಿಸುವ ನೋಂದಾಣಿ ದಿನಾಂಕವು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸುವ ಕೊನೆಯ ದಿನಾಂಕಕ್ಕೆ ಹಿಂದಿನ 2 ವರ್ಷದೊಳಗಿದ್ದು, ವಿದ್ಯಾರ್ಥಿಗಳು ಅರ್ಜಿ

ಸಲ್ಲಿಸುವ ಸಾಲಿನಿಂದ ಅಂದರೆ 2022-23ನೇ ಸಾಲಿನಲ್ಲಿ ಪ್ರಥಮ ವರ್ಷದ ಪಿಹೆಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು.

5. **ವಯೋಮಿತಿ:** ವಿದ್ಯಾರ್ಥಿಯ ಗರಿಷ್ಠ ವಯೋಮಿತಿ 35 ವರ್ಷಗಳು.
6. **ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಮಂಜೂರಾತಿಗಾಗಿ ನಿಗದಿಪಡಿಸಿರುವ ವಿದ್ಯಾರ್ಥಿ ಮತ್ತು ಕುಟುಂಬ ಒಟ್ಟು ವಾರ್ಷಿಕ ಆದಾಯಮಿತಿ**.
   (a) ಪ್ರವರ್ಗ-1 – ರೂ.4.50 ಲಕ್ಷ.
   (b) ಪ್ರವರ್ಗ-2(ಎ), 3(ಎ) ಮತ್ತು 3(ಬಿ) – ರೂ.3.50 ಲಕ್ಷ.

7. ತಹಶೀಲ್ದಾರರಿಂದ ಪಡೆಯುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರವು ಕಡ್ಡಾಯವಾಗಿ ವಿದ್ಯಾರ್ಥಿಯ ಹೆಸರಿನಲ್ಲಿಯೇ ಇರಬೇಕು ಹಾಗೂ ಅದು expiry ಆಗಿರಬಾರದು.
8. ಕೇಂದ್ರ/ರಾಜ್ಯ ಸರ್ಕಾರಿ/ ಅನುದಾನಿತ ಸಂಸ್ಥೆ/ ಸಾರ್ವಜನಿಕ ಸ್ವಾಮ್ಯತೆಗೆ ಒಳಪಟ್ಟ ಸಂಸ್ಥೆಗಳ ಉದ್ಯೋಗಿಗಳು ಈ ಸೌಲಭ್ಯವನ್ನು ಪಡೆಯಲು ಅರ್ಹರಲ್ಲ.
9. ಒಂದೇ ಕುಟುಂಬದ ಗರಿಷ್ಠ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.
10. ಒಬ್ಬ ವಿದ್ಯಾರ್ಥಿಗೆ ಒಂದು ಬಾರಿ ಮಾತ್ರ ಪಿಎಚ್.ಡಿ ಅಧ್ಯಯನಕ್ಕಾಗಿ ಈ ಸೌಲಭ್ಯವನ್ನು ನೀಡಲಾಗುವುದು.
11. **ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ**:
   (a) ಈ ಯೋಜನೆಯಡಿ ಸೌಲಭ್ಯವನ್ನು ಪಡೆಯಲು ಅರ್ಹ ವಿದ್ಯಾರ್ಥಿಗಳು ಆನ್-ಲೈನ್ ಮೂಲಕ ಸೂಕ್ತ ದಾಖಲೆಗಳೊಂದಿಗೆ ಅರ್ಜಿಯನ್ನು ಸಲ್ಲಿಸುವುದು.
   (b) ಆನ್-ಲೈನ್ ಅರ್ಜಿಯೊಂದಿಗೆ JPG/JPEG Format ನಲ್ಲಿ ಸ್ಕ್ಯಾನ್ ಮಾಡಿ ಸಲ್ಲಿಸಬೇಕಾದ ದಾಖಲೆಗಳು(ಪ್ರತಿ ದಾಖಲೆಯು ಕನಿಷ್ಠ 100 ರಿಂದ 150 ಕೆ.ಬಿ ಇರಬೇಕು)
   (c) ಆನ್-ಲೈನ್ ನೊಂದಿಗೆ ಸಲ್ಲಿಸಬೇಕಾದ ದಾಖಲೆಗಳು-
   - ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
   - ವಾಸಸ್ಥಳ ಪ್ರಮಾಣ ಪತ್ರ.
   - ಸ್ನಾತಕೋತ್ತರ ಪದವಿಯ ಅಂಕಪಟ್ಟಿಗಳು.
   - ಸ್ನಾತಕೋತ್ತರ ಪದವಿ ಪ್ರಮಾಣ ಪತ್ರ (Convocation Certificate).
   - ಇತರೆ ಯಾವುದೇ ಮೂಲಗಳಿಂದ ವ್ಯಾಸಂಗ ವೇತನಕ್ಕೆ ಆಯ್ಕೆಯಾಗದಿರುವ ಬಗ್ಗೆ ಶಿಕ್ಷಣ ಸಂಸ್ಥೆ/ಕಾಲೇಜು/ವಿಶ್ವವಿದ್ಯಾಲಯ/ ಅಧಿಕೃತ ಸಂಸ್ಥೆಯಿಂದ ನಿಗದಿತ ನಮೂನೆಯಲ್ಲಿ ದೃಢೀಕರಣ ಪತ್ರ. (ಇದಕ್ಕೆ ಸಂಬಂಧಿಸಿದ ನಮೂನೆಯನ್ನು ಇಲಾಖಾ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಂಡು ಭರ್ತಿ ಮಾಡಿ ಸಂಬಂಧಿಸಿದವರಿಂದ ದೃಢೀಕರಿಸಿ ಅಪ್-ಲೋಡ್ ಮಾಡುವುದು).
   - ಆಧಾರ್ ಕಾರ್ಡ್ ಪ್ರತಿ.
   - ಪಿಎಚ್.ಡಿ ನೋಂದಣಿ ಪ್ರಮಾಣ ಪತ್ರ.
   - ಪಿಎಚ್.ಡಿ ಯ ಪ್ರಥಮ ವರ್ಷಕ್ಕೆ ದಾಖಲಾಗಲು ಪಾವತಿಸಿರುವ ಶುಲ್ಕ ರಶೀದಿ.
   - ವಿಶೇಷ ಚೇತನ ವಿದ್ಯಾರ್ಥಿಯಾಗಿದ್ದಲ್ಲಿ, ಆ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
   - ಬ್ಯಾಂಕ್ ಖಾತೆ ವಿವರ (ಆಯ್ಕೆಯಾಗುವ ಅರ್ಹ ವಿದ್ಯಾರ್ಥಿಗಳಿಗೆ ಆಧಾರ್ ಲಿಂಕ್ ಆಗಿರುವ ಬ್ಯಾಂಕ್ ಖಾತೆಗೆ ಮಾತ್ರ ವ್ಯಾಸಂಗ ವೇತನ ಪಾವತಿಸುವುದರಿಂದ, ವಿದ್ಯಾರ್ಥಿಗಳು ಆಧಾರ್ ಲಿಂಕ್ ಆಗಿರುವ ತಮ್ಮ ಬ್ಯಾಂಕ್ ಖಾತೆ ವಿವರವನ್ನು ಮಾತ್ರ ನೀಡುವುದು).

- ವಿದ್ಯಾರ್ಥಿಯ ಪಾಸ್ ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ ಹಾಗೂ ಅದರ ಕೆಳಗೆ ವಿದ್ಯಾರ್ಥಿಯ ಸಹಿ ಬರುವಂತೆ ಸ್ಕ್ಯಾನ್ ಮಾಡಿ JPG Format (ಕನಿಷ್ಠ 20 ಕೆ.ಬಿ ಯಿಂದ 30 ಕೆ.ಬಿ ಇರಬೇಕು) ನಲ್ಲಿ ಅಪ್ ಲೋಡ್ ಮಾಡಬೇಕು.
- ಮುಚ್ಚಳಿಕೆ ಪ್ರಮಾಣ ಪತ್ರ (ನಮೂನೆ ಇಲಾಖಾ ವೆಬ್-ಸೈಟ್ ನಲ್ಲಿ ಲಭ್ಯವಿದೆ)

12. ಆನ್ ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯ ಪ್ರತಿ ಹಾಗೂ ಅಪ್ ಲೋಡ್ ಮಾಡಿರುವ ಎಲ್ಲಾ ದಾಖಲೆಗಳ ಒಂದು ಸೆಟ್ ದೃಢೀಕೃತ ಪ್ರತಿಯನ್ನು ವಿದ್ಯಾರ್ಥಿಗಳು, ಆಯಾ ಸಂಸ್ಥೆ/ಕಾಲೇಜು/ವಿಶ್ವವಿದ್ಯಾಲಯಗಳಿರುವ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಿ, ಮೂಲ ದಾಖಲೆಗಳ ಪರಿಶೀಲನೆ ಮಾಡಿಸಿಕೊಳ್ಳುವುದು.
13. ಆಫ್ ಲೈನ್ ಅರ್ಜಿಗಳು ಹಾಗೂ ನಿಗದಿತ ದಿನಾಂಕದ ನಂತರ ಬರುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.
14. ವಿದ್ಯಾರ್ಥಿಗಳು ಸ್ನಾತಕೋತ್ತರ ಪದವಿಯಲ್ಲಿ ಪಡೆದಿರುವ ಅಂಕಗಳು, ಪ್ರವರ್ಗವಾರು ಮೀಸಲಾತಿ ಹಾಗೂ ಅನುದಾನ ಲಭ್ಯತೆಗೆ ಅನುಗುಣವಾಗಿ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗುವುದು.
15. ಸಿ.ಬಿ.ಎಸ್.ಇ/ ಐ.ಸಿ.ಎಸ್.ಇ ಯಲ್ಲಿ 10ನೇ ತರಗತಿಯನ್ನು ಅಧ್ಯಯನ ಮಾಡಿರುವ ವಿದ್ಯಾರ್ಥಿಗಳ ಮಾಹಿತಿಯು online ಅರ್ಜಿಯಲ್ಲಿ ಲಭ್ಯವಿಲ್ಲದೇ ಇದ್ದಲ್ಲಿ (ಆನ್-ಲೈನ್ ಅರ್ಜಿ ಸಲ್ಲಿಸಲು ಸಾಧ್ಯವಾಗದೇ ಇದ್ದಲ್ಲಿ) ನಿಮ್ಮ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಗಳ ಕಛೇರಿಗೆ ಹೋಗಿ 10ನೇ ತರಗತಿಯ ರಿಜಿಸ್ಟರ್ ನಂಬರ್, ಜನ್ಮ ದಿನಾಂಕ ತಂದೆ ಮತ್ತು ತಾಯಿಯ ಹೆಸರು, ವಿಶೇಷಚೇತನ ಮಾಹಿತಿ ಹಾಗೂ ಶಾಲೆಯ ಹೆಸರು ಮತ್ತು ವಿಳಾಸವನ್ನು ನೋಂದಾಯಿಸಿಕೊಂಡು ನಂತರ ಆನ್-ಲೈನ್ ನಲ್ಲಿ ಅರ್ಜಿ ಸಲ್ಲಿಸುವುದು.
16. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ ವಿಳಾಸವು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವೆಬ್ ಸೈಟ್ ನಲ್ಲಿ ಲಭ್ಯವಿರುತ್ತದೆ (https://bcwd.karnataka.gov.in)
17. On-line ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:13.01.2023 ರ ಸಂಜೆ 5.00 ಗಂಟೆ.
18. ಆನ್ ಲೈನ್ ಅರ್ಜಿ ಹಾಗೂ ಎಲ್ಲಾ ದಾಖಲೆಗಳ ಒಂದು ಸೆಟ್ ದೃಢೀಕೃತ ಪ್ರತಿಯನ್ನು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಲು ಕೊನೆಯ ದಿನಾಂಕ: 16.01.2023 ಸಂಜೆ 5.30 ಗಂಟೆ.
19. ಸಹಾಯವಾಣಿ ಸಂಖ್ಯೆ: 8050770004 (ಕಛೇರಿಯ ಕಾರ್ಯನಿರ್ವಹಿಸುವ ಸಮಯ ಬೆಳಗ್ಗೆ 10.00 ರಿಂದ ಸಂಜೆ 05.30 ರವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.